# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | 1349(1509) |
| **ಸದಸ್ಯರ ಹೆಸರು** | ಶ್ರೀ ಎನ್. ನಾಗರಾಜು (ಎಂ.ಟಿ.ಬಿ) |
| **ಉತ್ತರಿಸಿಬೇಕಾದದಿನಾಂಕ** | 21.03.2025 |

| ಕ್ರ. ಸಂ | ಪ್ರಶ್ನೆಗಳು | ಉತ್ತರ |
|---|---|---|
| ಅ | ದಿನಾಂಕ: 20.05.2023 ರಿಂದ ಇದುವರೆವಿಗೂ ಹೊಸಕೋಟೆ ವಿಧಾನಸಭಾ ಕ್ಷೇತ್ರಕ್ಕೆ ವಿವಿಧ ಇಲಾಖೆಗಳಿಂದ ಕರ್ನಾಟಕ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ (ಕೆ.ಆರ್.ಐ.ಡಿ.ಎಲ್) ದಿಂದ ಎಷ್ಟು ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ; (ಇಲಾಖಾವಾರು ಕಾಮಗಾರಿಗಳ ವಿವರಗಳನ್ನು ನೀಡುವುದು) | 2023-24 ರ ದಿನಾಂಕ: 20.05.2023 ರಿಂದ 2024-25 ನೇ ಸಾಲಿನ ವರೆವಿಗೂ ಹೊಸಕೋಟೆ ವಿಧಾನಸಭಾ ಕ್ಷೇತ್ರಕ್ಕೆ ವಿವಿಧ ಇಲಾಖೆಗಳಡಿ ಕೆಆರ್‌ಐಡಿಎಲ್ ಸಂಸ್ಥೆಯಿಂದ 250 ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಕಾಮಗಾರಿಗಳ ವಿವರಗಳನ್ನು ಸಿಡಿ ರೂಪದಲ್ಲಿ ಲಗತ್ತಿಸಿದೆ. |
| ಆ | ಈ ಎಲ್ಲಾ ಕಾಮಗಾರಿಗಳಿಗೆ ಸರ್ಕಾರ ಆಡಳಿತಾತ್ಮಕ ಅನುಮೋದನೆ ನೀಡಿದೆಯೇ; ಹಾಗಿದ್ದಲ್ಲಿ ಆಡಳಿತಾತ್ಮಕ ಅನುಮೋದನೆಯ ಆದೇಶಗಳ ಪ್ರತಿಗಳನ್ನು ನೀಡುವುದು | ಈ ಎಲ್ಲಾ ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ಪಡೆಯಲಾಗಿರುತ್ತದೆ. ಆಡಳಿತಾತ್ಮಕ ಅನುಮೋದನೆಯ ಆದೇಶಗಳ ಪ್ರತಿಗಳನ್ನು ಸಿಡಿ ರೂಪದಲ್ಲಿ ಲಗತ್ತಿಸಿದೆ. |
| ಇ | ಈ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವಾಗ ಸ್ಥಳೀಯ ಆಡಳಿತ, ಶಿಷ್ಟಾಚಾರವನ್ನು ಪಾಲನೆ ಮಾಡಲಾಗಿದೆಯೇ ಹಾಗಿದ್ದಲ್ಲಿ, ಈ ಎಲ್ಲಾ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವ ಸಂದರ್ಭದಲ್ಲಿ ಮುದ್ರಿಸುವ ಆಹ್ವಾನ ಪತ್ರಿಕೆಗಳ ಪ್ರತಿಗಳನ್ನು ನೀಡುವುದು; | ಸಂಸ್ಥೆಗೆ ವಹಿಸಲಾದ ಕಾಮಗಾರಿಗಳಿಗೆ ಆಯಾ ಗ್ರಾಮಗಳಲ್ಲಿ ಸ್ಥಳೀಯ ಸಾರ್ಜನಿಕರು/ಮುಖಂಡರುಗಳ ಮುಂದಾಳತ್ವ ಹಾಗೂ ಮಾನ್ಯ ಶಾಸಕರ ಉಪಸ್ಥಿತಿಯಲ್ಲಿ ಗುದ್ದಲಿ ಪೂಜೆಯನ್ನು ನೆರವೇರಿಸಿದ ನಂತರ ಕಾಮಗಾರಿಗಳನ್ನು ಪ್ರಾರಂಭಿಸಲಾಗಿದೆ. ಅಧಿಕೃತ ಕಾರ್ಯಕ್ರಮ ನಿಗಧಿಯಂತೆ ಶಿಷ್ಟಾಚಾರವನ್ನು ಪಾಲಿಸಲಾಗುತ್ತಿದೆ. |
| ಈ | ಹಾಗಿದ್ದಲ್ಲಿ ಶಿಷ್ಟಾಚಾರವನ್ನು ಉಲ್ಲಂಘನೆ ಮಾಡಿರುವ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು (ಇಲಾಖಾವಾರು ವಿವರಗಳನ್ನು ನೀಡುವುದು) | ಶಿಷ್ಟಾಚಾರವನ್ನು ಉಲ್ಲಂಘನೆ ಬಗ್ಗೆ ಯಾವುದೇ ದೂರುಗಳು ಬಂದಿರುವುದಿಲ್ಲ. |

ಕಡತಸಂಖ್ಯೆ: ಗ್ರಾಅಪ/ಆರ್‌ಆರ್‌ಸಿ/ಕವಿಪ/1509/155ನೇ/ಅ /2025

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು